# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 675(876)
ಸದಸ್ಯರ ಹೆಸರು : ಶ್ರೀ ಮಧು ಜಿ ಮಾದೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 16.12.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳ ಸಂಖ್ಯೆ ಹಾಗೂ ಖಾಲಿ ಇರುವ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)</td><td>ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ/ ಪ್ರೌಢಶಾಲೆ/ ಪದವಿಪೂರ್ವ ಕಾಲೇಜುಗಳ ಸಂಖ್ಯೆ ಮತ್ತು ಖಾಲಿ ಇರುವ ಬೋಧಕ ಹುದ್ದೆಗಳ ವಿವರ ಈ ಕೆಳಗಿನಂತಿದೆ
<table>
<tr><th></th><th>ಪ್ರಾಥಮಿಕ</th><th>ಪ್ರೌಢ</th><th>ಪದವಿ ಪೂರ್ವ ಕಾಲೇಜು</th></tr>
<tr><td>ಶಾಲಾ/ ಕಾಲೇಜುಗಳ ಸಂಖ್ಯೆ</td><td>41905</td><td>4850</td><td>1237</td></tr>
<tr><td>ಖಾಲಿ ಹುದ್ದೆಗಳ ವಿವರ</td><td>50067</td><td>9705</td><td>4611</td></tr>
</table>
(ಅನುಬಂಧ-01 ರಲ್ಲಿ ಒದಗಿಸಲಾಗಿದೆ)</td></tr>
<tr><td>ಆ</td><td>ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳ ಎದುರಾಗಿ ನೇಮಕ ಮಾಡಿಕೊಳ್ಳಲಾದ ಅತಿಥಿ ಶಿಕ್ಷಕರು/ಉಪನ್ಯಾಸಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)</td><td>ರಾಜ್ಯದ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಅಥವಾ ನೇರ ನೇಮಕಾತಿಯಿಂದ ಹುದ್ದೆಗಳನ್ನು ಭರ್ತಿ ಮಾಡುವವರೆಗೆ ತಾತ್ಕಾಲಿಕವಾಗಿ ಈ ಕೆಳಕಂಡಂತೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ.
<table>
<tr><th>ಪ್ರಾಥಮಿಕ</th><th>ಪ್ರೌಢ</th><th>ಪದವಿ ಪೂರ್ವ ಕಾಲೇಜು</th></tr>
<tr><td>35000</td><td>8968</td><td>4689</td></tr>
</table></td></tr>
<tr><td>ಇ</td><td>ಅತಿಥಿ ಶಿಕ್ಷಕರು / ಉಪನ್ಯಾಸಕರಿಗೆ ಮಾಹೆಯಾನ ಪಾವತಿಸುತ್ತಿರುವ ಗೌರವಧನ ಎಷ್ಟು; (ವಿವರ ನೀಡುವುದು)</td><td>ರಾಜ್ಯದ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರು/ ಉಪನ್ಯಾಸಕರಿಗೆ ಈ ಕೆಳಕಂಡಂತೆ ಗೌರವ ಸಂಭಾವನೆ ಪಾವತಿಸಲಾಗುತ್ತಿದೆ.
<table>
<tr><th>ಪ್ರಾಥಮಿಕ ಶಿಕ್ಷಕರಿಗೆ</th><th>ಪ್ರೌಢಶಾಲಾ ಶಿಕ್ಷಕರಿಗೆ</th><th>ಪದವಿಪೂರ್ವ ಕಾಲೇಜು ಉಪನ್ಯಾಸಕರಿಗೆ</th></tr>
<tr><td>ರೂ. 10000/-</td><td>ರೂ. 10500/-</td><td>ರೂ. 12000/-</td></tr>
</table></td></tr>
</table>

| | | |
|---|---|---|
| ಈ | ಹೆಚ್ಚಿನ ಸೇವಾ ಅನುಭವ ಹೊಂದಿರುವ ಹಾಗೂ ಶಾಲೆ/ಕಾಲೇಜುಗಳಲ್ಲಿ ಪೂರ್ಣಾವಧಿ ಕೆಲಸ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರು/ಉಪನ್ಯಾಸಕರಿಗೆ ಮಾಸಿಕ ಪಾವತಿಸುತ್ತಿರುವ ಗೌರವ ಸಂಭಾವನೆ ತೀರಾ ಕಡಿಮೆಯಿದ್ದು, ಈ ಮೊತ್ತವನ್ನು ಪರಿಷ್ಕರಣೆ ಮಾಡಲು ಸರ್ಕಾರ ಕ್ರಮಕೈಗೊಳ್ಳಬಾರದೇಕೆ; | ರಾಜ್ಯದ ಸರ್ಕಾರಿ ಪ್ರಾಥಮಿಕ/ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಎದುರಾಗಿ ತಾತ್ಕಾಲಿಕವಾಗಿ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ನೇಮಕ ಮಾಡಿರುವ ಅತಿಥಿ ಶಿಕ್ಷಕರಿಗೆ ಗೌರವ ಸಂಭಾವನೆಯನ್ನು ಅನುಕ್ರಮವಾಗಿ ರೂ 15000/- ಹಾಗೂ ರೂ. 16000/- ಪರಿಷ್ಕರಿಸಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು.<br><br>ಅತಿಥಿ ಶಿಕ್ಷಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಮಾಸಿಕ ಗೌರವಧನದ ಮೊತ್ತವನ್ನು ಆರ್ಥಿಕ ಇಲಾಖೆಯು ದಿನಾಂಕ 13-06-2022 ರಲ್ಲಿ ಪರಿಷ್ಕರಿಸಲು ಸಹಮತಿ ನೀಡಿರುವುದರಿಂದ ಗೌರವ ಸಂಭಾವನೆಯನ್ನು ಮತ್ತೊಮ್ಮೆ ಪರಿಷ್ಕರಿಸಲು ಸಾಧ್ಯವಿಲ್ಲವೆಂದು ದಿನಾಂಕ: 25-03-2024 ರಂದು ತಿಳಿಸಿರುತ್ತದೆ. |
| ಉ | ಪ್ರಸಕ್ತ ಸಾಲಿನಲ್ಲಿ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಉದ್ದೇಶಿಸಿದೆಯೇ? ಒಂದು ವೇಳೆ ಭರ್ತಿಗೆ ನಿರ್ಧರಿಸಿದ್ದರೆ ಹುದ್ದೆಗಳ ಸಂಖ್ಯೆ ಎಷ್ಟು? (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ ಇಪಿ 230 ಪಿಬಿಎಸ್ 2024, ದಿನಾಂಕ: 07-10-2024ರಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿನ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಪೈಕಿ 5267 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಅನುಮತಿ ನೀಡಲಾಗಿದೆ.<br><br>ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ವಿವಿಧ ವಿಷಯಗಳ 814 ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ಸರ್ಕಾರಿ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಬೋಧಕರ ಹುದ್ದೆಗಳಲ್ಲಿ 7500 ಪ್ರಾಥಮಿಕ ಶಿಕ್ಷಕರ ಮತ್ತು 2500 ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ.<br><br>ಆದರೆ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೆನೆನಿ 2024 ದಿನಾಂಕ 25.11.2024 ರನ್ವಯ ದಿನಾಂಕ:28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ. |

**ಇಪಿ 461 ಎಸ್‌ಇಎಸ್ 2024**

**(ಎಸ್ ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**